ದಿನಾಂಕ: 24.03.2022 40

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮುನಿರಾಜುಗೌಡ ಪಿ.ಎಂ. ಇವರು ನಿಯಮ 72ರಡಿ ನೀಡಿರುವ ಸೂಚನೆಗೆ ಸರ್ಕಾರದ ಉತ್ತರ**

**ವಿಷಯ:**

ಬೆಂಗಳೂರು ದಕ್ಷಿಣ ತಾಲ್ಲೂಕು ಕಂಬತ್ತಹಳ್ಳಿ, ಸರ್ವೆ ನಂಬರ್ 85 ರಲ್ಲಿನ ನೆಲ್ಲೂ ರೆಡ್ಡಿ ಕ್ವಾರಿ ಪ್ರದೇಶದಲ್ಲಿ ಹಲವಾರು ತಿಂಗಳುಗಳಿಂದ ಬೆಂಗಳೂರು ನಗರದ ಆಸ್ಪತ್ರೆಗಳಿಂದ ಉತ್ಪಾದನೆಯಾಗುತ್ತಿರುವ ಜೈವಿಕ ತ್ಯಾಜ್ಯವನ್ನು ಯಾವುದೇ ರೀತಿಯ ತಾಂತ್ರಿಕ ಸಂಸ್ಕರಣೆ ಇಲ್ಲದೆ, ಅನಧಿಕೃತವಾಗಿ ರಾತ್ರಿ ವೇಳೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸೇರಿದ ವಾಹನಗಳು ಹಾಗೂ ಖಾಸಗಿ ವಾಹನಗಳಲ್ಲಿ ತಂದು ಬೇಕಾಬಿಟ್ಟಿಯಾಗಿ ಸುರಿಯಲಾಗುತ್ತಿದೆ. ಇದರಿಂದ ಸದರಿ ಕ್ವಾರಿ ಪ್ರದೇಶದ ಸುತ್ತಮುತ್ತಲಿನ ವಾತಾವರಣ ಹಾಗೂ ಅಂತರ್ಜಲದ ಮೇಲು ದುಷ್ಪರಿಣಾಮ ಉಂಟಾಗಿರುತ್ತದೆ. ಇದರಿಂದ ಆಜು ಬಾಜಿನಲ್ಲಿರುವ ಗ್ರಾಮಗಳಲ್ಲಿ ವಾಸಿಸುತ್ತಿರುವ ಹಲವಾರು ಸಾರ್ವಜನಿಕರಲ್ಲಿ ಗಂಭೀರ ಆರೋಗ್ಯ ಸಮಸ್ಯೆ ಉಂಟಾಗಿರುವುದರ ಜೊತೆಗೆ, ಕೊಳವೆ ಬಾವಿಗಳಲ್ಲಿಯೂ ಸಹ ಕಲುಷಿತ ನೀರು ಬರಲು ಕಾರಣವಾಗಿರುತ್ತದೆ. ಜೈವಿಕ ತ್ಯಾಜ್ಯದ ಅನಧಿಕೃತ ವಿಲೇವಾರಿಯಿಂದ ಮೇಲೆ ಹೇಳಿದ ಗಂಭೀರ ಸಮಸ್ಯೆಗಳನ್ನು ಎದುರಿಸುತ್ತಿರುವ ಬಗ್ಗೆ ಸಾರ್ವಜನಿಕರು ಬಿಬಿಎಂಪಿ ಆರೋಗ್ಯ ಇಲಾಖೆ ಹಾಗೂ ಪೊಲೀಸ್ ಇಲಾಖೆಗಳಿಗೆ ದೂರು ನೀಡಿದಾಗ್ಯೂ ಸಹ ಸಂಬಂಧಪಟ್ಟ ಅಧಿಕಾರಿಗಳು ಯಾವುದೇ ಕ್ರಮ ಕೈಗೊಂಡಿರುವುದಿಲ್ಲ ಮತ್ತು ಜೈವಿಕ ತ್ಯಾಜ್ಯದ ಅನಧಿಕೃತ ವಿಲೇವಾರಿ ಅವ್ಯಾಹತವಾಗಿ ಮುಂದುವರೆದಿರುತ್ತದೆ. ಜೈವಿಕ ತ್ಯಾಜ್ಯವನ್ನೂ ತಾಂತ್ರಿಕ ರೀತಿಯಲ್ಲಿ ಸಂಸ್ಕರಣೆ ಮಾಡುವ ಕೇಂದ್ರಗಳಲ್ಲಿ ವಿಲೇವಾರಿ ಮಾಡದೇ ಸುತ್ತಮುತ್ತ ಜನ ವಸತಿ ಇರುವ ಪ್ರದೇಶದಲ್ಲಿ ಅನಧಿಕೃತವಾಗಿ ತಂದು ಸುರಿಯುವುದನ್ನು ತಡೆಗಟ್ಟಿ, ಇದರಿಂದ ಸಾರ್ವಜನಿಕರಿಗೆ ಉಂಟಾಗಿರುವ ಸಮಸ್ಯೆಗಳನ್ನು ನಿವಾರಣೆ ಮಾಡಲು ವಿಫಲರಾಗಿರುವ ಅಧಿಕಾರಿಗಳ ಮೇಲೆ ಅಗತ್ಯ ಕ್ರಮ ಜರುಗಿಸುವ ಬಗ್ಗೆ ಮತ್ತು ಕೆಂಬತ್ತ ಹಳ್ಳಿ ಸರ್ವೇ ನಂ. 85, ನೆಲ್ಲುರೆಡ್ಡಿ ಕ್ವಾರಿ ಪ್ರದೇಶದಲ್ಲಿ ಅನಧಿಕೃತ ಜೈವಿಕ ತ್ಯಾಜ್ಯದ ವಿಲೇವಾರಿಯನ್ನು ಪೂರ್ಣವಾಗಿ ತಡೆಗಟ್ಟಿ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಾಸಿಸುತ್ತಿರುವ ಸಾರ್ವಜನಿಕರ ಸಮಸ್ಯೆ ನಿವಾರಣೆ ಮಾಡುವ ಕುರಿತು ನಿಯಮ 72 ರನ್ವಯ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ 198 ವಾರ್ಡ್‌ಗಳಲ್ಲಿ ಪಾಲಿಕೆಯ ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳು / ಹೆರಿಗೆ ಆಸ್ಪತ್ರೆಗಳು / ರೆಫರಲ್ ಆಸ್ಪತ್ರೆಗಳು / ಡಯಾಲಿಸಿಸ್ ಘಟಕಗಳಲ್ಲಿ ಉತ್ಪತ್ತಿಯಾಗುವ ಜೈವಿಕ ತ್ಯಾಜ್ಯದ ವಿಲೇವಾರಿಯನ್ನು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಅಧಿಕೃತ ಸಂಸ್ಥೆಗಳಾದ ಮೆ॥ ಮೆಡಿಕೇರ್ ಎನ್‌ವಿರಾನ್‌ಮೆಂಟಲ್ ಮ್ಯಾನೇಜ್‌ಮೆಂಟ್ ಪ್ರೈವೇಟ್ ಲಿಮಿಟೆಡ್, ಮೆ॥ ಮರಡಿ ಎಕೋ ಇಂಡಸ್ಟ್ರೀಸ್ ಪ್ರೈವೇಟ್ ಲಿಮಿಟೆಡ್, ಮೆ॥ ಅನು ಆಟೋಕ್ಲೇವ್ ಅಂಡ್ ಇನ್ಸಿನ್ ಸರ್ವೀಸಸ್ ಮತ್ತು ಮೆ॥ ವಿ.ವಿ ಇನ್ಸಿನ್ ಸಲ್ಯೂಷನ್ಸ್ ಪ್ರೈವೇಟ್ ಲಿಮಿಟೆಡ್ ರವರುಗಳಿಗೆ ಟೆಂಡರ್ ಮುಖಾಂತರ ಬಿಬಿಎಂಪಿ ವತಿಯಿಂದ ಕಾರ್ಯಾದೇಶ ನೀಡಲಾಗಿರುತ್ತದೆ. ಸದರಿ ಸಂಸ್ಥೆಗಳ ಮುಖಾಂತರ ಪಾಲಿಕೆಯ ಆಸ್ಪತ್ರೆಗಳಲ್ಲಿ ಉತ್ಪತ್ತಿಯಾಗುವ ಜೈವಿಕ ತ್ಯಾಜ್ಯ ವಿಲೇವಾರಿಯನ್ನು ಸಂಸ್ಕರಣಾ ಘಟಕಗಳ ಮುಖಾಂತರ ನಿರ್ವಹಿಸಲಾಗುತ್ತಿದೆ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಮತ್ತು ಬೆಂಗಳೂರು ನಗರ ಜಿಲ್ಲೆಯಾದ್ಯಂತ ಇರುವ ಆಸ್ಪತ್ರೆಗಳು, ಲ್ಯಾಬ್‌ಗಳು, ಕ್ಲಿನಿಕ್‌ಗಳಿಗೆ, Karnataka Private Medical Establishment Act ಪ್ರಕಾರ ನೋಂದಣಿ ಪ್ರಮಾಣ ಪತ್ರ ನೀಡುವ ಕಾರ್ಯವನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಛೇರಿ, ಬೆಂಗಳೂರು ನಗರ ಜಿಲ್ಲೆ ರವರ ವತಿಯಿಂದ ನಿರ್ವಹಿಸಲಾಗುತ್ತಿದೆ.

. . .2/–

ರಾಜ್ಯದಲ್ಲಿ ಪ್ರಸ್ತುತ Karnataka Private Medical Establishment Act ಅನ್ನು ಜಾರಿ ಮಾಡುವ ಸಕ್ಷಮ ಪ್ರಾಧಿಕಾರವು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ ಆಗಿರುತ್ತಾರೆ. ಸದರಿ ಆಸ್ಪತ್ರೆಗಳು, ಲ್ಯಾಬ್‌ಗಳು, ಕ್ಲಿನಿಕ್‌ಗಳಿಂದ ಉತ್ಪತ್ತಿಯಾಗುವ ಜೈವಿಕ ತ್ಯಾಜ್ಯದ ವಿಲೇವಾರಿಯ ಬಗ್ಗೆ ಮೇಲುಸ್ತುವಾರಿ ಮಾಡುವ ಅಧಿಕಾರ ಮತ್ತು ಜವಾಬ್ದಾರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ ರವರಿಗೆ ಇರುತ್ತದೆ.

ಅದರಂತೆ, ಜೈವಿಕ ತ್ಯಾಜ್ಯದ ವಿಲೇವಾರಿಯನ್ನು ಮಾಡುವ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಬಿಬಿಎಂಪಿ ವತಿಯಿಂದ ಈಗಾಗಲೇ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ ಮತ್ತು ಪರಿಸರ ಅಧಿಕಾರಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಬೆಂಗಳೂರು ದಕ್ಷಿಣ ತಾಲ್ಲೂಕು ರವರುಗಳಿಗೆ ಪತ್ರ ಬರೆಯಲಾಗಿರುತ್ತದೆ.

ಮುಂದುವರೆದು, ಪಾಲಿಕೆಯ ಆರೋಗ್ಯ ವೈದ್ಯಾಧಿಕಾರಿಗಳು, ಹಿರಿಯ ಆರೋಗ್ಯ ಪರಿವೀಕ್ಷಕರನ್ನು ಒಳಗೊಂಡ ಅಧಿಕಾರಿಗಳ ತಂಡವು ಸ್ಥಳ ಪರಿಶೀಲಿಸಲಾಗಿದ್ದು, ಸದರಿ ಸಂದರ್ಭದಲ್ಲಿ ಈ ಕೆಳಕಂಡಂತೆ ವರದಿ ಸಲ್ಲಿಸಿರುತ್ತಾರೆ.

- ಸರ್ವೆ ನಂ. 85 ರಂತೆ ಯಾವುದೇ ಸ್ಥಳವಿರುವುದಿಲ್ಲ. ಆದರೆ ಸರ್ವೆ ನಂ. 39ರ ಕ್ವಾರಿ ಪ್ರದೇಶದಲ್ಲಿ ಕಟ್ಟಡ ಸಾಮಗ್ರಿಗಳ ಅಳಿದುಳಿದ ಸಾಮಗ್ರಿಗಳು, ಮಣ್ಣು ಇತ್ಯಾದಿಗಳನ್ನು ವಾಹನಗಳು / ಟ್ರ್ಯಾಕ್ಟರ್‌ಗಳ ಮೂಲಕ ಸುರಿಯುತ್ತಿದ್ದಾರೆ.
- ಸರ್ವೆ ನಂ. 55 ರಲ್ಲಿ ಜೈವಿಕ ಘನತ್ಯಾಜ್ಯವನ್ನು ಸುರಿಯುತ್ತಿರುವ ಬಗ್ಗೆ ಕಂಡುಬಂದಿದ್ದು, ಅಪೋಲೊ ಸ್ಪೆಷಾಲಿಟಿ ಆಸ್ಪತ್ರೆ, ನಂ. 21/2, 14ನೇ ರಸ್ತೆ, 2ನೇ ಬ್ಲಾಕ್, ಜಯನಗರ, ಬೆಂಗಳೂರು-560 011 ಇಲ್ಲಿನ ರಸೀದಿಯು ದೊರೆತಿದ್ದು, ಸದರಿ ಆಸ್ಪತ್ರೆಯವರಿಗೆ ಕಾರಣ ಕೇಳಿ ನೋಟೀಸ್ ಜಾರಿ ಮಾಡಲಾಗಿರುತ್ತದೆ. (ಪ್ರತಿ ಲಗತ್ತಿಸಿದೆ).
- ಸದರಿ ಆಸ್ಪತ್ರೆಯವರು ಜೈವಿಕ ಘನತ್ಯಾಜ್ಯದ ವಿಲೇವಾರಿಗೆ ಒಡಂಬಡಿಕೆ ಮಾಡಿಕೊಂಡಿರುವ ಸಂಸ್ಥೆಯಾಗಿರುವ ಮೆ॥ ಮರಡಿ ಏಜೆನ್ಸೀಸ್, ಹಾರೋಹಳ್ಳಿ, ಕನಕಪುರ ರಸ್ತೆ, ರಾಮನಗರ ಜಿಲ್ಲೆ ರವರಿಗೂ ಸಹಾ ಬಿಬಿಎಂಪಿ ವತಿಯಿಂದ ನೋಟೀಸ್ ಜಾರಿ ಮಾಡಲಾಗಿರುತ್ತದೆ.
- ಬೆಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಆಸ್ಪತ್ರೆಗಳು ಹಾಗೂ ಕ್ಲಿನಿಕ್‌ಗಳಿಗೆ ಭೇಟಿ ನೀಡಿ ಸದರಿ ಆಸ್ಪತ್ರೆಗಳು ಹಾಗೂ ಸರ್ಕಾರಿ ಆಸ್ಪತ್ರೆಗಳಿಂದ ಬರುವಂತಹ ಜೈವಿಕ ಘನ ತ್ಯಾಜ್ಯ ವಿಲೇವಾರಿ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಲಾಗಿರುತ್ತದೆ. ಅದರಂತೆ ಈ ಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟು 08 ಸರ್ಕಾರಿ ಆಸ್ಪತ್ರೆಗಳು, 19 ಖಾಸಗಿ ಆಸ್ಪತ್ರೆಗಳು, 162 ಕ್ಲಿನಿಕ್‌ಗಳು ಇರುತ್ತವೆ. ಸದರಿ ಆಸ್ಪತ್ರೆಗಳು ಹಾಗೂ ಕ್ಲಿನಿಕ್‌ಗಳು M/s. Maradi Eco Industry and Meera Enviro Tech ಸಂಸ್ಥೆಗಳೊಂದಿಗೆ ಜೈವಿಕ ಘನ ತ್ಯಾಜ್ಯ ವಿಲೇವಾರಿಗೆ ಒಡಂಬಡಿಕೆ ಮಾಡಿಕೊಂಡಿದ್ದು, ಸದರಿ ತ್ಯಾಜ್ಯ ವಿಲೇವಾರಿಯನ್ನು ವೈಜ್ಞಾನಿಕವಾಗಿ ಮಾಡುತ್ತಿದ್ದಾರೆಂದು ಒಡಂಬಡಿಕೆ ಪತ್ರ ನೀಡಿರುತ್ತಾರೆಂದು ತಿಳಿಸಿರುತ್ತಾರೆ.

**ಸಂಖ್ಯೆ: ನಅಇ 130 ಎಂಎನ್‌ವೈ 2022 (ಭಾಗ-1) (ಇ)**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ